**ಕರ್ನಾಟಕ ಸರ್ಕಾರ**

**ಸಂಖ್ಯೆ:ಸಿಆಸುಇ:105:ಆರ್.ಟಿ.ಐ.:2015**

**ಕರ್ನಾಟಕ ಸರ್ಕಾರದ ಸಚಿವಾಲಯ,**
**ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ (ಜನಸ್ಪಂದನ)**
**3ನೇ ಮಹಡಿ, ಪೋಡಿಯಂ ಬ್ಲಾಕ್,**
**ವಿಶ್ವೇಶ್ವರಯ್ಯ ಮುಖ್ಯ ಗೋಪುರ,**
**ಬೆಂಗಳೂರು, ದಿನಾಂಕ: 11.08.2015.**

## ಸುತ್ತೋಲೆ

ವಿಷಯ: ಮಾಹಿತಿ ಹಕ್ಕು ಅಧಿನಿಯಮ, 2005ರಡಿ ಅರ್ಜಿದಾರರಿಗೆ ಮಾಹಿತಿ ನೀಡುವಾಗ ಸಾರ್ವಜನಿಕ ಮಾಹಿತಿ ಅಧಿಕಾರಿಯ ಹೆಸರಿನೊಂದಿಗೆ, ಸಂಪೂರ್ಣ ವಿಳಾಸ ನಮೂದಿಸುವ ಬಗ್ಗೆ

ಉಲ್ಲೇಖ: 1. ಸಿಆಸುಇ 59 ಆರ್.ಟಿ.ಐ 2009, ದಿನಾಂಕ: 15.04.2009
2. ಸಿಆಸುಇ 101 ಆರ್.ಟಿ.ಐ 2009, ದಿನಾಂಕ: 06.07.2009

---0---

ಮಾಹಿತಿ ಹಕ್ಕು ಅಧಿನಿಯಮ, 2005ರಡಿ ಸ್ವೀಕರಿಸುವ ಮಾಹಿತಿ ಕೋರಿಕೆ ಅರ್ಜಿಗಳನ್ನು ಸಂಬಂಧಿಸಿದ ಸಾರ್ವಜನಿಕ ಮಾಹಿತಿ ಅಧಿಕಾರಿಗಳು ಪರಿಶೀಲನೆ ಮಾಡಿ ನಿಗದಿತ ಅವಧಿಯಲ್ಲಿ ಸೂಕ್ತ ಉತ್ತರವನ್ನು ನಿಯಮಾನುಸಾರ ಒದಗಿಸತಕ್ಕದ್ದೆಂದು ಹಾಗೂ ಮಾಹಿತಿ ನೀಡುವಾಗ ಅರ್ಜಿದಾರರಿಗೆ ಸಂಬಂಧಿಸಿದ ಸಾರ್ವಜನಿಕ ಮಾಹಿತಿ ಅಧಿಕಾರಿಯ ಹೆಸರು, ವಿಳಾಸ, ದೂರವಾಣಿ ಸಂಖ್ಯೆ, ಇ-ಮೇಲ್ ವಿಳಾಸ ಗಳನ್ನು ಮತ್ತು ಮೇಲ್ಮನವಿ ಪ್ರಾಧಿಕಾರದ ಸಂಪೂರ್ಣ ವಿಳಾಸ ಇತ್ಯಾದಿ ಅವಶ್ಯಕ ಮಾಹಿತಿಯನ್ನು ಕಡ್ಡಾಯವಾಗಿ ನಮೂದಿಸಿ ಕಳುಹಿಸುವಂತೆ ತಮ್ಮ ಆಡಳಿತದ ಅಧೀನಕ್ಕೊಳಪಡುವ ಎಲ್ಲಾ ಸಾರ್ವಜನಿಕ ಪ್ರಾಧಿಕಾರಗಳ, ಸಾರ್ವಜನಿಕ ಮಾಹಿತಿ ಅಧಿಕಾರಿಗಳಿಗೆ ಹಾಗೂ ಮೊದಲ ಮೇಲ್ಮನವಿ ಪ್ರಾಧಿಕಾರಿಗಳಿಗೆ ಸೂಕ್ತ ನಿರ್ದೇಶನ ನೀಡುವುದು.

**(ಪರಮೇಶ್ ಪಾಂಡೆ)**
ಸರ್ಕಾರದ ಪ್ರಧಾನ ಕಾರ್ಯದರ್ಶಿ,
ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ
(ಜನಸ್ಪಂದನ)

**ಇವರಿಗೆ,**

ಸರ್ಕಾರದ ಎಲ್ಲಾ ಪ್ರಧಾನ ಕಾರ್ಯದರ್ಶಿಗಳು / ಕಾರ್ಯದರ್ಶಿಗಳು

**ಪ್ರತಿ:**

1. ಸರ್ಕಾರದ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು.
2. ಸರ್ಕಾರದ ಎಲ್ಲ ಅಪರ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು.
3. ಮುಖ್ಯ ಮಾಹಿತಿ ಆಯುಕ್ತರ ಆಪ್ತ ಸಹಾಯಕರು, ಕರ್ನಾಟಕ ಮಾಹಿತಿ ಆಯೋಗ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
4. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಸಿಆಸುಇ(ಜನಸ್ಪಂದನ), ವಿ.ವಿ.ಗೋಪುರ. ಬೆಂಗಳೂರು.
5. ಕಾರ್ಯದರ್ಶಿಗಳು, ಕರ್ನಾಟಕ ಮಾಹಿತಿ ಆಯೋಗ, ಬಹುಮಹಡಿಗಳ ಕಟ್ಟಡ, ಬೆಂಗಳೂರು.